ಕರ್ನಾಟಕ ಸರ್ಕಾರ

ದಿನಾಂಕ: 25–07–2017

# ಪೊಲೀಸ್ ಇಲಾಖೆಯಲ್ಲಿ ಅಶಿಸ್ತು ಸಹಿಸುವುದಿಲ್ಲ – ಮುಖ್ಯಮಂತ್ರಿ




ಬೆಂಗಳೂರು, ಜುಲೈ 25

ಶಿಸ್ತಿಗೆ ಹೆಸರಾಗಿರುವ ಪೊಲೀಸ್ ಇಲಾಖೆಯಲ್ಲಿ 'ಅಶಿಸ್ತು' ಯಾವುದೇ ಕಾರಣಕ್ಕೂ ತಲೆದೊರಬಾರದು. ಪೊಲೀಸ್ ಇಲಾಖೆಯಲ್ಲಿನ ಅಶಿಸ್ತನ್ನು ಸರ್ಕಾರ ಎಂದಿಗೂ ಸಹಿಸುವುದಿಲ್ಲ ಮತ್ತು ಕಠಿಣ ಕ್ರಮ ಕೈಗೊಳ್ಳಲು ಹಿಂಜರಿಯುವುದಿಲ್ಲ ಎಂದು ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರು ತಿಳಿಸಿದರು.

ವಿಧಾನ ಸೌಧ ಬೃಹತ್ ಮೆಟ್ಟಿಲುಗಳ ಮುಂಭಾಗ ಇಂದು ಕರ್ನಾಟಕ ರಾಜ್ಯ ಮೀಸಲು ಪೊಲೀಸ್ ವತಿಯಿಂದ ಆಯೋಜಿಸಲಾಗಿದ್ದ ಕರ್ನಾಟಕ ದರ್ಶನ ಸೈಕಲ್ ಜಾಥಾ ಮುಕ್ತಾಯ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡುತ್ತಿದ್ದ ಅವರು, ಪೊಲೀಸರು ಆತ್ಮಸ್ಥೈರ್ಯವನ್ನು ಹೊಂದಿರಬೇಕು, ಕ್ರಿಯಾಶೀಲರಾಗಿ, ಸಮಾಜಮುಖಿಯಾಗಿ ತಮ್ಮನ್ನು ತಾವು ತೊಡಗಿಸಿಕೊಳ್ಳಬೇಕು ಎಂದು ಕಿವಿಮಾತು ಹೇಳಿದರು.

ಪೊಲೀಸರು ದೈಹಿಕವಾಗಿ ಸದೃಢವಾಗಿರಬೇಕು ಮತ್ತು ಮಾನಸಿಕವಾಗಿ ಸಮರ್ಥರಾಗಿರಬೇಕು ಹೀಗಿದ್ದಾಗ ಮಾತ್ರ ಯಾವುದೇ ಪರಿಸ್ಥಿತಿಯನ್ನು ಎದುರಿಸಲು ಸಾಧ್ಯ . .ಇದು ಕರ್ತವ್ಯದ ಒಂದು ಭಾಗ ಎಂದು ಪೊಲೀಸರು ಭಾವಿಸಬೇಕು ಎಂದು ತಿಳಿಸಿದರು.

ಸಾರ್ವಜನಿಕರ ಜೊತೆ ಪೊಲೀಸರ ಸಂಬಂಧ ಉತ್ತಮವಾಗಿರಬೇಕು. ಮಧುರವಾದ ಬಾಂಧವ್ಯವನ್ನು ಹೊಂದಬೇಕು. ಪೊಲೀಸರು ಜನಸ್ನೇಹಿಯಾಗಿದ್ದಾರೆ ಎಂಬ ಭಾವನೆ ಜನರಲ್ಲಿ ಬರಬೇಕು ಎಂದರು.

ಕೆ.ಎಸ್.ಆರ್.ಪಿ. ಪೊಲೀಸರು ಬಹುತೇಕ ಸಂದರ್ಭದಲ್ಲಿ ಒತ್ತಡದಲ್ಲಿ ಕಾರ್ಯನಿರ್ವಹಿಸಬೇಕಾಗುತ್ತದೆ. ಸಮಾಜದ ಸ್ವಾಸ್ಥ ಕಾಪಾಡುವುದು, ಪ್ರತಿಯೊಬ್ಬ ಪ್ರಜೆಯ ರಕ್ಷಣೆ, ಆಸ್ತಿ ರಕ್ಷಣೆ ಪೊಲೀಸ್ ಇಲಾಖೆಯ ಬಹುದೊಡ್ಡ ಜವಾಬ್ದಾರಿ ಎಂದರು.

ಸಮಾಜದಲ್ಲಿ ಅನೇಕ ದುಷ್ಟಶಕ್ತಿಗಳು ಇರುತ್ತವೆ. ಸಾಮರಸ್ಯ, ನೆಮ್ಮದಿ ಬಯಸುವ ಜನರಿಗೆ ಆಗಾಗ ತೊಂದರೆ ಉದ್ಭವವಾಗುತ್ತಿರುತ್ತವೆ. ಅಂತಹ ಸಂದರ್ಭದಲ್ಲಿ ಸಮಾಜದಲ್ಲಿ ಸಾಮರಸ್ಯ ಕಾಪಾಡುವುದು ಅವಶ್ಯ. ಕಾನೂನು ಸುವ್ಯವಸ್ಥೆ ಕಾಪಾಡುವಾಗ ಕೆಲವು ಬಾರಿ ಪೊಲೀಸರು ಕಠಿಣವಾಗಿ ವರ್ತಿಸಬೇಕಾಗುತ್ತದೆ ಎಂದರು.

ಹಿರಿಯ ಪೊಲೀಸರು ಅಧಿಕಾರಿಗಳು ಕಿರಿಯ ಅಧಿಕಾರಿಗಳ ಕಾರ್ಯ ಚಟುವಟಿಕೆಗಳಲ್ಲಿ ಭಾಗವಹಿಸಬೇಕು ಮತ್ತು ಅವರ ಸಮಸ್ಯೆಗಳನ್ನು ಆಲಿಸಿ ಅವರಿಗೆ ಸ್ಪಂಧಿಸುವುದು ಹಿರಿಯ ಅಧಿಕಾರಿಗಳ ಕರ್ತವ್ಯಗಳ ಒಂದು ಭಾಗ ಎಂದರು.

ಸೈಕಲ್ ಜಾಥಾದಲ್ಲಿ ಭಾಗವಹಿಸಿದ್ದ 59 ಮಂದಿ ಪೊಲೀಸ್ ಕ್ರೀಡಾಪಟುಗಳು ಮತ್ತು ಕೆ.ಎಸ್.ಆರ್.ಪಿ. ಎಡಿಜಿಪಿ ಭಾಸ್ಕರ್‌ರಾವ್ ಸೇರಿದಂತೆ ಪೊಲೀಸ್ ಅಧಿಕಾರಿಗಳಾದ ಅಯ್ಯಪ್ಪ ಮತ್ತು ಸಮಂತ್ ಅವರುಗಳನ್ನು ಇದೇ ಸಂದರ್ಭ ಮುಖ್ಯಮಂತ್ರಿಗಳು ಸನ್ಮಾನಿಸಿ ಪ್ರಶಂಸನಾ ಪತ್ರ ಮತ್ತು ನೆನಪಿನ ಕಾಣಿಕೆ ವಿತರಿಸಿದರು.

ಡಿ.ಜಿ.ಐ.ಜಿ.ಪಿ. ರೂಪಕ್‌ಕುಮಾರ್ ದತ್ತ ಅವರು ವೇದಿಕೆ ಮೇಲೆ ನೆರೆದಿದ್ದ ಗಣ್ಯರನ್ನು ಸ್ವಾಗತಿಸಿ ಪ್ರಾಸ್ತವಿಕವಾಗಿ ಮಾತನಾಡುತ್ತಾ ಕೆ.ಎಸ್.ಆರ್.ಪಿ. ಸೈಕಲಿಸ್ಟ್ ಕ್ರೀಡಾಪಟುಗಳು ಜುಲೈ 12, 2017 ರಂದು ಬೀದರ್‌ನಿಂದ ಪ್ರಾರಂಭಿಸಿ 14 ದಿನಗಳಕಾಲ 1750 ಕಿ.ಮಿ. ಕ್ರಮಿಸಿ ಮಾಗಡಿ ಮೂಲಕ ರಾಜ್ಯದ ಶಕ್ತಿಕೇಂದ್ರ ವಿಧಾನಸೌಧವನ್ನು ಇಂದು ಪ್ರವೇಶಿಸಿದ್ದಾರೆ. ಸಾಮಾಜಿಕ ಐಕ್ಯತೆ, ಪೊಲೀಸ್ ಸಾರ್ವಜನಿಕರ ನಡುವೆ ಉತ್ತಮ ಬಾಂಧವ್ಯ ಪರಿಸರ ರಕ್ಷಣೆ

ಕ್ರೀಡಾ ಮನೋಭಾವ, ಸ್ವಚ್ಛತೆ ಇವುಗಳ ಕುರಿತು ಜಾಥಾದುದ್ದಕ್ಕೂ ಸಾರ್ವಜನಿಕರಲ್ಲಿ ಅರಿವು ಮೂಡಿಸಿದ್ದಾರೆ.  ಒಟ್ಟು 28 ಜಿಲ್ಲೆಗಳನ್ನು ಕ್ರಮಿಸಿದ್ದಾರೆ ಎಂದು ವಿವರಿಸಿದರು.

ಕ್ರೀಡಾ ಯುವಸಬಲೀಕರಣ ಮತ್ತು ಮೀನುಗಾರಿಕೆ ಸಚಿವ ಪ್ರಮೋದ್ ಮಧ್ವರಾಜ್ ಅವರು ಇದೇ ಸಂದರ್ಭ 5.00 ಲಕ್ಷ ರೂ.ಗಳ ಚೆಕ್ಕನ್ನು ಕೆ.ಎಸ್.ಆರ್.ಪಿ.ಗೆ ಹಸ್ತಾಂತರಿಸಿದರು.

ಕಾರ್ಯಕ್ರಮದಲ್ಲಿ ಪ್ರವಾಸೋದ್ಯಮ ಸಚಿವ ಪ್ರಿಯಾಂಕ್ ಖರ್ಗೆ, ಕರ್ನಾಟಕ ಒಲಂಪಿಕ್ ಸಂಸ್ಥೆ ಅಧ್ಯಕ್ಷರಾದ ಕೆ. ಗೋವಿಂದರಾಜ್, ಗೃಹಸಚಿವರ ಸಲಹೆಗಾರ ಕೆಂಪಯ್ಯ, ಗೃಹ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ ಸುಭಾಶ್‌ಚಂದ್ರ ಅವರುಗಳು ಉಪಸ್ಥಿತರಿದ್ದರು.

ಮಮತ

-------------